ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 05–04–2017

# ಪತ್ರಿಕಾ ಆಮಂತ್ರಣ

1. ಸಫಾಯಿ ಕರ್ಮಚಾರಿಗಳ ಆಯೋಗದಿಂದ ಭೇಟಿ:

ಶ್ರೀ ಎಂ.ಆರ್. ವೆಂಕಟೇಶ್,
ಅಧ್ಯಕ್ಷರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ
ಶ್ರೀಮತಿ ಜಿ.ಕೆ. ಮೀನಾಕ್ಷಮ್ಮ, ಸದಸ್ಯರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ
ಶ್ರೀ ಗೋಕುಲನಾರಾಯಣಸ್ವಾಮಿ, ಸದಸ್ಯರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ

ದಿನಾಂಕ: 06–04–2017 ಗುರುವಾರ ಬೆಳಿಗ್ಗೆ 11–30 ಗಂಟೆಗೆ

ಸ್ಥಳ: ಬಿ.ಬಿ.ಎಂ.ಪಿ. ವ್ಯಾಪ್ತಿಯ ಸರ್‌ಸಿ.ವಿ. ರಾಮನ್ ನಗರ ವಾರ್ಡ್ ನಂ. 79, ಪಿ.ಎಸ್.ಕೆ. ನಾಯ್ಡು ರಸ್ತೆ, ಎನ್.ಸಿ. ಕಾಲೋನಿ, ಮತ್ತು ಕದರಯ್ಯನ ಪಾಳ್ಯ ಇಂದಿರಾನಗರ ಪಿ.ಕೆ. ಕ್ವಾಟರ್ಸ್‌ಗಳಿಗೆ ಭೇಟಿ

2. ರಾಜೀವ್‌ಗಾಂಧೀ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ 19 ನೇ ವಾರ್ಷಿಕ ಘಟಿಕೋತ್ಸವ:

ಅಧ್ಯಕ್ಷತೆ:

ಶ್ರೀ ವಜುಭಾಯ್ ವಾಲಾ, ರಾಜ್ಯಪಾಲರು,
ಹಾಗೂ ವಿಶ್ವವಿದ್ಯಾಲಯದ ಕುಲಾಧಿಪತಿಗಳು

ಉಪಸ್ಥಿತಿ:

ಡಾ: ಶರಣಪ್ರಕಾಶ್ ರುದ್ರಪ್ಪ ಪಾಟೀಲ್,
ವೈದ್ಯಕೀಯ ಶಿಕ್ಷಣ ಸಚಿವರು,

**ದಿನಾಂಕ: 6–4–2017 ಗುರುವಾರ ಬೆಳಿಗ್ಗೆ 10–30**

**ಸ್ಥಳ: ನಿಮ್ಹಾನ್ಸ್ ಕನ್ವೆನ್ಷನ್ ಸೆಂಟರ್, ಡಾ: ಎಂ.ಹೆಚ್. ಮರೀಗೌಡ ರಸ್ತೆ, ಬೆಂಗಳೂರು**

# <u>ಪತ್ರಿಕಾ ಪ್ರಕಟಣೆ</u>

## <u>ತಾತ್ಕಾಲಿಕ ಆಯ್ಕೆ ಪಟ್ಟಿ ಹಾಗೂ ಹುದ್ದೆಗಳ ಕಟ್–ಆಫ್ ಅಂಕ ಪ್ರಕಟ</u>

ಬೆಂಗಳೂರು, ಏಪ್ರಿಲ್ 5 (ಕರ್ನಾಟಕ ವಾರ್ತೆ)

**ಕರ್ನಾಟಕ ಲೋಕಸೇವಾ ಆಯೋಗ ಅಧಿಸೂಚನೆ ದಿನಾಂಕ: 03–03–2016 ರಲ್ಲಿ ಅಧಿಸೂಚಿಸಿರುವ ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಗ್ರಂಥಪಾಲಕರು 02 ಹುದ್ದೆಗಳು, ಪೌರಾಡಳಿತ ಇಲಾಖೆಯಲ್ಲಿನ ನಗರ ಸ್ಥಳೀಯ ಸಂಸ್ಥೆಗಳ ಅಕೌಂಟೆಂಟ್ 39 ಹುದ್ದೆಗಳು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿ ಲೆಕ್ಕ ಸಹಾಯಕರು 445 ಹುದ್ದೆಗಳು, ಪೌರಾಡಳಿತ ಇಲಾಖೆಯಲ್ಲಿನ ಮಹಾನಗರ ಪಾಲಿಕೆಗಳಲ್ಲಿ ಪ್ರಥಮ ದರ್ಜೆ ಕಂದಾಯ ನಿರೀಕ್ಷಕರ 58 ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಹಾಗೂ ಸದರಿ ಹುದ್ದೆಗಳ ಕಟ್–ಆಫ್ ಅಂಕಗಳನ್ನು ಆಯೋಗದ ವೆಬ್‌ಸೈಟ್ www.kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.**

**ಸದರಿ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಆಯ್ಕೆಪಟ್ಟಿ ಪ್ರಕಟಿಸಿದ ದಿನಾಂಕದಿಂದ ಏಳು ದಿನಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು –1 ಇವರಿಗೆ ಸಲ್ಲಿಸಬಹುದು ಎಂದು ಆಯೋಗದ ಪ್ರಕಟಣೆ ತಿಳಿಸಿದೆ.**

**ಎಸ್‌ಎಂ/ಕೆಎಂ**

ಛಾಯಾಚಿತ್ರ ಶೀರ್ಷಿಕೆ:

ಡಾ: ಆರತಿ ಕೃಷ್ಣ, ಉಪಾಧ್ಯಕ್ಷರು, ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ ಸರ್ಕಾರ, ಬೆಂಗಳೂರು ಮಲೇಶಿಯಾ ಪ್ರಧಾನ ಮಂತ್ರಿ ಶ್ರೀ ಮೊಹಮದ್ ನಜೀಬ್ ಬಿನ್ ತುನ್ ಅಬ್ದುಲ್ ರಜಾಕ್ ಇವರನ್ನು ನವದೆಹಲಿಯಲ್ಲಿ ಭೇಟಿ ಮಾಡಿ ಭಾರತ–ಮಲೇಷಿಯಾ ವಾಣಿಜ್ಯ ಒಕ್ಕೂಟ ಏರ್ಪಡಿಸಿದ್ದ ಸಭೆಯಲ್ಲಿ ಪಾಲ್ಗೊಂಡು ಅನಿವಾಸಿ ಭಾರತೀಯರ/ಕನ್ನಡಿಗರ, ಕರ್ನಾಟಕದಲ್ಲಿ ಬಂಡವಾಳ ಹೂಡಿಕೆ ಹಾಗೂ ಇನ್ನಿತರ ವಾಣಿಜ್ಯ ಉದ್ದೇಶಿತ ವಿಷಯಗಳ ಕುರಿತು ಮಲೇಷಿಯಾ ಪ್ರಧಾನಿಗಳೊಂದಿಗೆ ಮುಕ್ತವಾಗಿ ಚರ್ಚೆ ನಡೆಸಿದರು.

# ಬಾಬು ಜಗಜೀವನ ರಾಮ್ ಪ್ರತಿಮೆಗೆ ಸಚಿವರಿಂದ ಮಾಲಾರ್ಪಣೆ

ಬೆಂಗಳೂರು, ಏಪ್ರಿಲ್ 5 (ಕರ್ನಾಟಕ ವಾರ್ತೆ)

ರಾಷ್ಟ್ರದ ಮಾಜಿ ಪ್ರಧಾನಿ ಡಾ: ಬಾಬು ಜಗಜೀವನ ರಾಮ್ ಅವರ 110ನೇ ಜನ್ಮ ದಿನಾಚರಣೆ ಅಂಗವಾಗಿ ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು ವಿಧಾನಸೌಧ ಬಳಿಯಿರುವ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.

ಬಾಬು ಜಗಜೀವನ ರಾಮ್ ಅವರು ಭಾರತದ ಉಪ ಪ್ರಧಾನ ಮಂತ್ರಿಯಾಗಿ ರಕ್ಷಣೆ/ಗೃಹ, ಕೃಷಿ ಸಚಿವರಾಗಿ ಜನಪ್ರಿಯ ಕಾರ್ಯಕ್ರಮಗಳನ್ನು ಜಾರಿಗೆ ತಂದವರು. ಅವರು ಕೃಷಿ ಕ್ಷೇತ್ರದಲ್ಲಿ ಅಮೂಲಾಗ್ರ ಬದಲಾವಣೆ ತಂದವರು. ಆ ಕಾರಣಕ್ಕಾಗಿ ಅವರನ್ನು ಹಸಿರುಕ್ರಾಂತಿ ಹರಿಕಾರರೆಂದು ಸಚಿವರು ಸ್ಮರಿಸಿದರು.

ಕೇಂದ್ರ ಮಾಜಿ ಸಚಿವ ಕೆ.ಎಚ್. ಮುನಿಯಪ್ಪ ಅವರು ಈ ಸಂದರ್ಭದಲ್ಲಿ ಮಾತನಾಡಿ ಇವರು ಗಾಂಧಿ ಹಾದಿಯಲ್ಲಿ ನಡೆದುಕೊಂಡು ಬಂದವರು. ಇವರು ತಮ್ಮದೇ ಆದ ಕೊಡುಗೆಯನ್ನು ಸಮಾಜಕ್ಕೆ ನೀಡಿದವರು. ಇಂದಿನ ಪೀಳಿಗೆಯವರು ಅವರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ನಡೆಯಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಸುಭಾಷ್ ಕುಂಠಿಯಾ, ಸಮಾಜ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಮಣಿವಣ್ಣನ್ ಅವರು ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು, ದಲಿತ ಸಂಘಟನೆ ಮುಖಂಡರು ಉಪಸ್ಥಿತರಿದ್ದರು.

ಎಸ್‌ಎಂ:ಜೆಡಿ:ಜಿಪಿಆರ್

# ಬೇಕರಿ ಮತ್ತು ಮೌಲ್ಯವರ್ಧಿತ ಉತ್ಪನ್ನಗಳ ಬಗ್ಗೆ ಬೇಸಿಗೆ ತರಬೇತಿ ಶಿಬಿರ

ಬೆಂಗಳೂರು, ಏಪ್ರಿಲ್ 5 (ಕರ್ನಾಟಕ ವಾರ್ತೆ)

ಬೇಕರಿ ತರಬೇತಿ ಕೇಂದ್ರ, ವಿಸ್ತರಣಾ ನಿರ್ದೇಶನಾಲಯ ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು ಇವರು ಆಸಕ್ತರಿಗೆ ವಿವಿಧ ತರಬೇತಿಗಳನ್ನು ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಆಯೋಜಿಸಿದ್ದಾರೆ.

ಗೃಹ ಮಟ್ಟದ ಬೇಕರಿ, ಶಾಲಾ ಮಕ್ಕಳಿಗೆ ಬೇಕರಿ ತರಬೇತಿ (8 ರಿಂದ 16 ವರ್ಷದೊಳಗಿನವರು) ವಿಶೇಷ ಕೇಕ್‌ಗಳು, ಮೊಟ್ಟೆ ರಹಿತ ಬೇಕರಿ ಪದಾರ್ಥಗಳು, ರಾಗಿ ಉತ್ಪನ್ನಗಳು, ಹಣ್ಣು ತರಕಾರಿಗಳ ಸಂಸ್ಕರಣೆ, ನೆಲ್ಲಿಕಾಯಿ ಉತ್ಪನ್ನಗಳು, ಚಾಕಲೇಟ್ ತಯಾರಿಕೆ, ಕಿರುಧಾನ್ಯಗಳ ಮೌಲ್ಯವರ್ಧನೆ ಹಾಗೂ ಉಲ್ಲಾಸಕರ ಜ್ಯೂಸ್ ತಯಾರಿಕೆ.

ಆಸಕ್ತರು ಹೆಚ್ಚಿನ ವಿವರಗಳಿಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ, ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು – 560 024, ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080 – 23513370 ಮೂಲಕ ಸಂಪರ್ಕಿಸಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಬೇಕರಿ ತಂತ್ರಜ್ಞಾನ ತರಬೇತಿ

ಬೆಂಗಳೂರು, ಏಪ್ರಿಲ್ 5 (ಕರ್ನಾಟಕ ವಾರ್ತೆ)

ಹದಿನಾಲ್ಕು ವಾರದ ಬೇಕರಿ ಟೆಕ್ನಾಲಜಿ ತರಬೇತಿಗಾಗಿ ಅರ್ಜಿ ಸ್ವೀಕರಿಸಲಾಗುವುದು. ಅಭ್ಯರ್ಥಿಯು ಕನಿಷ್ಠ ಎಸ್.ಎಸ್.ಎಲ್.ಸಿ. (ಹತ್ತನೇ ತರಗತಿ) ಪಾಸಾಗಿರಬೇಕು. ನಿಗದಿತ ಅರ್ಜಿ ಫಾರಂಗಳನ್ನು ರೂ. 10.00 (ಹತ್ತು) ಪಾವತಿಸಿ ಬೇಕರಿ ತರಬೇತಿ ಕೇಂದ್ರ, ಕೃಷಿ ವಿಶ್ವ ವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು – 560 024 ಇಲ್ಲಿಂದ ಪಡೆದುಕೊಳ್ಳಬಹುದು.

ಅರ್ಜಿಯನ್ನು ಪಡೆಯಲು ಹಾಗೂ ಭರ್ತಿಮಾಡಿದ ಅರ್ಜಿಯನ್ನು ಹಿಂದಿರುಗಿಸಲು ಏಪ್ರಿಲ್ 17 ರಂದು ಸಂಜೆ 4.00 ಗಂಟೆಯೊಳಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ, ಕೃಷಿ ವಿಶ್ವ ವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು – 560 024, ಈ ವಿಳಾಸಕ್ಕೆ ತಲುಪಿಸಬೇಕು.

ಹೆಚ್ಚಿನ ವಿವರಗಳಿಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ, ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ ಇವರನ್ನು ಖುದ್ದಾಗಿ ಅಥವಾ ದೂರವಾಣಿ 080 – 23513370 ಮೂಲಕ ಸಂಪರ್ಕಿಸಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.